# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಲ್. ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಮತ್ತು ಶ್ರೀ ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಬಾಗೇಪಲ್ಲಿ ಇವರನ್ನು ಇಲಾಖಾ ವಿಚಾರಣೆ ಬಾಕಿ ಇಟ್ಟು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ - ಆದೇಶ.

**ಓದಲಾಗಿದೆ.**

1. ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಜಿಸಕಅ/ವಿಘಯೋ/ ಸಿಆರ್-10/2010-11, ದಿನಾಂಕ. 10-11-2011.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 10-11--2011ರ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ಇವರು ಬಾಗೇಪಲ್ಲಿ ತಾಲ್ಲೂಕಿನ ಪಾತಪಾಳ್ಯ ಗ್ರಾಮ ಪಂಚಾಯಿತಿಯ ದೇವರಾಜಪಲ್ಲಿ ಗ್ರಾಮದ ಪರಿಶಿಷ್ಟ ಜಾತಿಯ ಕಾಲೋನಿಯಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸಿಮೆಂಟ್ ರಸ್ತೆ ಮತ್ತು ಚರಂಡಿ ಕಾಮಗಾರಿಯ ರೂ.1.00ಲಕ್ಷಗಳ ಅಂದಾಜು ಪಟ್ಟಿಗೆ ದಿನಾಂಕ:10-06-2011ರಂದು ಆಡಳಿತಾತ್ಮಕ ಅನುಮೋದನೆ ನೀಡಿ ನಿಯಮಾನುಸಾರ ಕಾಮಗಾರಿಯನ್ನು ಕೈಗೊಳ್ಳುವಂತೆ ಸೂಚಿಸಲಾಗಿತ್ತು. ದಿನಾಂಕ:20.05.2011ರಂದು ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಾಗೇಪಲ್ಲಿ ಇವರು ಕಾಮಗಾರಿಯು ಪೂರ್ಣಗೊಂಡಿರುವ ಬಗ್ಗೆ ಸಲ್ಲಿಸಿದ್ದ ವರದಿಯನ್ನು ಪರಿಶೀಲಿಸಿದ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಚಿಕ್ಕಬಳ್ಳಾಪುರ ಇವರು ದಿನಾಂಕ:04-07-2011ರಲ್ಲಿ ಶ್ರೀ ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಾಗೇಪಲ್ಲಿ ಇವರಿಗೆ ನೀಡಲಾದ ಕಾರಣ ಕೇಳುವ ನೋಟೀಸಿಗೆ, ಸ'ದರಿಯವರು ದಿನಾಂಕ:21-07-2011 ರಂದು ನೀಡಲಾದ ಸಮಜಾಯಿಷಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿರುವುದಾಗಿ ತಿಳಿಸಿ ತದನಂತರ ಸದರಿ ಗ್ರಾಮದ ಪರಿಶಿಷ್ಟ ಜಾತಿಯ ಕಾಲೋನಿಯ ಕಾಮಗಾರಿಯು ಪೂರ್ಣಗೊಂಡಿರುವುದಿಲ್ಲವೆಂದು ವರದಿ ಮಾಡಿದ್ದರು ಎಂದು ತಿಳಿಸುತ್ತಾ, ದಿನಾಂಕ:12-09-2011ರಂದು ಶ್ರೀ ಎಲ್. ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಮತ್ತು ಶ್ರೀ ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಬಾಗೇಪಲ್ಲಿ ಇವರುಗಳ ವಿರುದ್ಧ ದೂರು ದಾಖಲಾಗಿದ್ದು, ಕಾರ್ಯಪಾಲಕ ಇಂಜಿನಿಯರ್, ಚಿಕ್ಕಬಳ್ಳಾಪುರ ಇವರು ಮೇಲ್ಕಂಡ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ದಿನಾಂಕ: 30-09-2011ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರನ್ನು ಕೋರಿರುತ್ತಾರೆಂದು ವರದಿ ಮಾಡುತ್ತಾ, ಶ್ರೀ ಎಲ್. ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಮತ್ತು ಶ್ರೀ ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಬಾಗೇಪಲ್ಲಿ ಇವರುಗಳ ವಿರುದ್ಧ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಕೋರಿರುತ್ತಾರೆ.

----2

ಶ್ರೀ ಎಲ್. ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಮತ್ತು ಶ್ರೀ ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಬಾಗೇಪಲ್ಲಿ ಇವರುಗಳು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3ನ್ನು ಉಲ್ಲಂಘಿಸಿರುವುದಲ್ಲದೆ, ಅಧಿಕಾರ ದುರುಪಯೋಗ ಹಾಗೂ ಹಣ ದುರುಪಯೋಗಪಡಿಸಿಕೊಂಡು, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ತೀವ್ರತರವಾದ ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿ ಅಧಿಕಾರಿ / ನೌಕರರುಗಳನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು 1957ರ 10ನೇ ನಿಯಮದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಅವರುಗಳ ವಿರುದ್ಧದ ಇಲಾಖಾ ವಿಚಾರಣೆ ಬಾಕಿ ಇಟ್ಟು, ಸೇವೆಯಿಂದ ಅಮಾನತ್ತುಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ.ಗ್ರಾಅಪ 45 ಇಎನ್‌ಕ್ಯೂ 2011, ಬೆಂಗಳೂರು,</u>**
**<u>ದಿನಾಂಕ. 22-12-2011</u>**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ನೆಲೆಗಟ್ಟಿನಲ್ಲಿ, ಶ್ರೀ ಎಲ್. ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಮತ್ತು ಶ್ರೀ ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಬಾಗೇಪಲ್ಲಿ ಇವರುಗಳನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ ನಿಯಮ 10 (1) (ಡಿ) ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿತಿ ಅವರುಗಳ ವಿರುದ್ಧದ ಇಲಾಖಾ ವಿಚಾರಣೆ ಬಾಕಿ ಇಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಸದರಿಯವರುಗಳು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ.

ಸದರಿಯವರುಗಳು ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮತಿಯಿಲ್ಲದೆ ಕೇಂದ್ರ ಸ್ಥಾನವನ್ನು ಬಿಡಕೂಡದೆಂದು ತಿಳಿಸಿದೆ.

ಇವರುಗಳ ಲೀನ್ ಅನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇಲ್ಲಿಗೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

22/12/2011
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)

----3

2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
8. ಅಧೀಕ್ಷಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ವೃತ್ತ, ಬೆಂಗಳೂರು.
9. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ.
10. ಶ್ರೀ ಎಲ್. ಜಯರಾಮಯ್ಯ, ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಬಾಗೇಪಲ್ಲಿ
11. ಶ್ರೀ ಶ್ರೀನಿವಾಸರೆಡ್ಡಿ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನೀಯರಿಂಗ್ ಉಪ ವಿಭಾಗ, ಬಾಗೇಪಲ್ಲಿ
12. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ / ಸೇವೆಗಳು-ಸಿ).
13. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
14. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
15. ರಕ್ಷಾ ಕಡತ / ಮೇಲ್ವಿಚಾರಕರು, ಗಣಕಯಂತ್ರ ಕೋಶ ವಿಭಾಗ, / ಹೆಚ್ಚುವರಿ ಪ್ರತಿಗಳು.